# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ– I<br>Part– I | ಬೆಂಗಳೂರು, ಸೋಮವಾರ,01, ಜೂನ್,2020 (ಜ್ಯೇಷ್ಠ,11,ಶಕವರ್ಷ,1942)<br>Bengaluru, MONDAY, 01, JUNE, 2020 ( Jyaistha,11,ShakaVarsha,1942) | ನಂ. 189<br>No. 189 |

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳು ಹಾಗೂ ಪಾನ್ ಮಸಾಲ ಉತ್ಪನ್ನಗಳ ಸೇವನೆ ಮತ್ತು ಉಗುಳುವುದನ್ನು ನಿಷೇಧಿಸುವ ಬಗ್ಗೆ.

**ಓದಲಾಗಿದೆ**: 1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಏಕ ಕಡತ ಸಂಖ್ಯೆ: NHM/NTCP/13/2017-18

2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಭಾರತ ಸರ್ಕಾರ, ಇವರ ಪತ್ರ ಸಂಖ್ಯೆ:Z.21020/19/2020 TC, ದಿನಾಂಕ: 10.04.2020

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಏಕ ಕಡತದಲ್ಲಿ ದೇಶದಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಹಾಗೂ ಪಾನ್ ಮಸಾಲ ಉತ್ಪನ್ನಗಳನ್ನು ಜಗಿದು ಉಗಿಯುವುದರಿಂದ ಕೋವಿಡ್-19 ಹಾಗೂ ಇತರೆ ಸಾಂಕ್ರಾಮಿಕ ರೋಗಗಳು ಇತರರಿಗೆ ಹರಡುವ ಸಂಭವ ಇರುತ್ತದೆಂದು ಉಲ್ಲೇಖಿಸಿರುತ್ತಾರೆ. ಈಗಾಗಲೇ ಬಿಹಾರ, ಜಾರ್ಖಂಡ್ ರಾಜ್ಯಗಳು ಎಲ್ಲಾ ರೀತಿಯ ಜಗಿಯುವ ತಂಬಾಕು, ಪಾನ್ ಮಸಾಲ ಉತ್ಪನ್ನಗಳನ್ನು Epidemics Diseases Act 1897 ಸೆಕ್ಷನ್ (2)ರಡಿಯಲ್ಲಿ ನಿಷೇಧಿಸಿ ಆದೇಶ ಹೊರಡಿಸಿರುತ್ತಾರೆ. ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹಾಗೂ ವಿಶ್ವ ಆರೋಗ್ಯ ಸಂಸ್ಥೆ ಹಾಗೂ Indian Council and Medical Research (ICMR) ತಿಳಿಸಿರುವಂತೆ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದರಿಂದ ಕೋವಿಡ್-19 ಸೋಂಕು ಇತರರಿಗೆ ಹರಡುವುದನ್ನು ತಪ್ಪಿಸಿ ಪರಿಣಾಮಕಾರಿಯಾಗಿ ಕೋವಿಡ್-19 ಸೋಂಕನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳು ಹಾಗೂ ಪಾನ್ ಮಸಾಲ ಉತ್ಪನ್ನಗಳ ಸೇವನೆ ಮತ್ತು ಉಗುಳುವುದನ್ನು ನಿಷೇಧಿಸಲು ಕೋರಿರುತ್ತಾರೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕೋವಿಡ್-19 ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳ ಸೇವನೆ ಮತ್ತು ಉಗಿಯುವುದನ್ನು ನಿಷೇಧಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಎಲ್ಲಾ ರಾಜ್ಯಗಳಿಗೂ ಸೂಚಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 118 ಸಿಜಿಇ 2020,**

**ಬೆಂಗಳೂರು, ದಿನಾಂಕ: 29.05.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧ್ಯಾದೇಶ 2020ರ ಸೆಕ್ಷನ್ 4(2)ಎ ಹಾಗೂ ಭಾರತೀಯ ದಂಡ ಸಂಹಿತೆ 1860ರ ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದರಿಂದ ಕೋವಿಡ್-19 ಹಾಗೂ ಇತರೆ ಸಾಂಕ್ರಾಮಿಕ ರೋಗಗಳು ಇತರರಿಗೆ

ಹರಡುವುದನ್ನು ತಪ್ಪಿಸಿ ಹಾಗೂ ಪರಿಣಾಮಕಾರಿಯಾಗಿ ಕೋವಿಡ್-19 ಸೋಂಕನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳು ಹಾಗೂ ಪಾನ್ ಮಸಾಲ ಉತ್ಪನ್ನಗಳ ಸೇವನೆ ಮತ್ತು ಉಗುಳುವುದನ್ನು ನಿಷೇಧಿಸಿದೆ. ಸಾರ್ವಜನಿಕರು ಇದನ್ನು ಉಲ್ಲಂಘಿಸಿದಲ್ಲಿ ಐ.ಪಿ.ಸಿ ಸೆಕ್ಷನ್ 188, 268, 269 , 270 ಅಡಿಯಲ್ಲಿ ಪ್ರಾಧೀಕೃತ ಅಧಿಕಾರಿಗಳು ಅಗತ್ಯ ಕಾನೂನು ಕ್ರಮವನ್ನು ಕೈಗೊಳ್ಳುವಂತೆ ಸಹ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಪದ್ಮ ವಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಆರೋಗ್ಯ 1&2)

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE